305 ಶ್ರೀ ಕುಲಕುರ್ಣಿ ಶ್ರೀಕಾಂತ್ ಸುಬ್ಬರಾವ್ : ಮಾನ್ಯ ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೃಷ್ಣಾ ನದಿಯಿಂದ ಏತ ನೀರಾವರಿ ಮಾಡಲು ಸಣ್ಣ ನೀರಾವರಿ ಇಲಾಖೆ ಮಾಡಿದ ಅಂದಾಜು ಪಟ್ಟಿಗೆ ತಾಂತ್ರಿಕ ಒಪ್ಪಿಗೆ ಪಡೆದಿದೆಯೇ;

ಆ) ಪಡೆದಿದ್ದಲ್ಲಿ, ಎಷ್ಟು ಎಕರೆ ಜಮೀನು ನೀರಾವರಿ ಸೌಲಭ್ಯ ಪಡೆಯುತ್ತಿದೆ;

ಇ) ದೊಡ್ಡ ನೀರಾವರಿ ಇಲಾಖೆಯಿಂದ ಪ್ರಸಕ್ತ ಸಾಲಿನಲ್ಲಿ ಏತ ನೀರಾವರಿಗೆ ಮಂಜೂರಾತಿ ನೀಡಿ, ಕಾರ್ಯಾರಂಭವಾಗುವುದೇ?

ಶ್ರೀ ಗೋವಿಂದ ಎಂ.ಕಾರಜೋಳ (ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು) :

ಅ) ಸಣ್ಣ ನೀರಾವರಿ ಇಲಾಖೆಯ ತಾಂತ್ರಿಕ ಮೌಲ್ಯ ನಿರ್ಣಯ ಸಮಿತಿಯು ಈ ಯೋಜನೆಯ ಅಂದಾಜು ಪಟ್ಟಿಗೆ ತೀರುವಳಿ ನೀಡಿದೆ. ಆದರೆ ಅನುದಾನದ ಕೊರತೆಯಿಂದಾಗಿ ಸದರಿ ಕಾಮಗಾರಿಯ ಅಂದಾಜು ಪಟ್ಟಿಗೆ ಸರ್ಕಾರದಿಂದ ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ನೀಡಿರುವುದಿಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಸಣ್ಣ ನೀರಾವರಿ ಇಲಾಖೆಯು ಯೋಜನೆಯ ಅಂದಾಜನ್ನು 31.00 ಕೋಟಿ ರೂ.ಗಳಿಗೆ ತಯಾರಿಸಿದೆ. ಅನುದಾನದ ಕೊರತೆಯಿಂದಾಗಿ ಈ ಕಾಮಗಾರಿಯನ್ನು ಪ್ರಸಕ್ತ ಸಾಲಿನಲ್ಲಿ ಕೈಗೆತ್ತಿಕೊಳ್ಳುತ್ತಿಲ್ಲ. ಮುಂದಿನ ಆರ್ಥಿಕ ವರ್ಷದಲ್ಲಿ ಅನುದಾನ ಲಭ್ಯವಾದಲ್ಲಿ ಕಾಮಗಾರಿಯನ್ನು ಸಣ್ಣ ನೀರಾವರಿ ಇಲಾಖೆಯಿಂದ ಕೈಗೆತ್ತಿಕೊಂಡು ನಿರ್ವಹಿಸಲಾಗುವುದು.

585 ಶ್ರೀ ಬಿ.ಸಿ.ಪಾಟೀಲ್ : ಮಾನ್ಯ ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಿರೇಕೆರೂರು ತಾಲ್ಲೂಕಿನ ಮಾವಿನತೋಪು ಕೆರೆಯು 240 ಎಕರೆ ವಿಸ್ತೀರ್ಣವಿದ್ದು, ಹಲವು ವರ್ಷಗಳ ಹಿಂದೆಯೆ ಈ ಕೆರೆಯ ಅಚ್ಚುಕಟ್ಟು ಒಡೆದಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈವರೆಗೂ ಯಾವ ಕ್ರಮವನ್ನು ಕೈಗೊಳ್ಳಲಾಗಿದೆ?

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು) :

ಅ) ಬಂದಿದೆ.

ಆ) 2007ರ ಅಕ್ಟೋಬರ್‌ನಲ್ಲಿ ಬಿದ್ದ ಭಾರಿ ಮಳೆಯಿಂದ ಕೆರೆ ಏರಿ ಹಾನಿಗೊಳಗಾಗಿದೆ. ಅನುದಾನ ಲಭ್ಯವಾಗದ ಕಾರಣ ದುರಸ್ತಿ ಕಾರ್ಯವನ್ನು ಕೈಗೊಳ್ಳಲಾಗಿಲ್ಲ. ಅತಿವೃಷ್ಟಿಯಿಂದ ಹಾನಿಗೊಳಗಾದ ಕಾಮಗಾರಿಯ ದುರಸ್ತಿಗಾಗಿ ರೂ.17.50 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಹಾವೇರಿಯ ಜಿಲ್ಲಾಧಿಕಾರಿಗಳನ್ನು ಕೋರಲಾಗಿದೆ. ಅನುದಾನ ಲಭ್ಯವಾದ ನಂತರ ದುರಸ್ತಿ ಕಾಮಗಾರಿಯನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗುವುದು.

66 ಶ್ರೀ ರಾಮಲಿಂಗಾ ರೆಡ್ಡಿ (ಬಿ.ಟಿ.ಎಂ.ಲೇಔಟ್) : ಮಾನ್ಯ ಜವಳಿ, ಯುವಜನ ಸೇವೆಗಳು ಮತ್ತು ಕ್ರೀಡಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ನೇಕಾರರ ಸಂಖ್ಯೆ ಎಷ್ಟು;

ಆ) ನೇಕಾರರಿಗೆ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಶೇ. 3ರ ಬಡ್ಡಿ ದರದಲ್ಲಿ ಸಾಲ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ ರಾಜ್ಯದಲ್ಲಿರುವ ನೇಕಾರರು ಸಂಕಷ್ಟದಲ್ಲಿರುವುದರಿಂದ ರಾಜ್ಯ ಸರ್ಕಾರವೂ ಶೇ. 3ರ ಬಡ್ಡಿ ದರದಲ್ಲಿ ಸಾಲ ನೀಡಲು ಕೈಗೊಂಡ ಕ್ರಮಗಳೇನು?

ಶ್ರೀ ಗೂಳಿಹಟ್ಟಿ ಡಿ.ಶೇಖರ್ (ಜವಳಿ, ಯುವಜನ ಸೇವೆಗಳು ಮತ್ತು ಕ್ರೀಡಾ ಸಚಿವರು) :

ಅ) 1995–96ರ ಗಣತಿಯಂತೆ ರಾಜ್ಯದಲ್ಲಿರುವ

1) ಕೈಮಗ್ಗ ನೇಕಾರರ ಸಂಖ್ಯೆ: 1,89,934

2) ವಿದ್ಯುತ್ ಮಗ್ಗ ನೇಕಾರರ ಸಂಖ್ಯೆ: 69,941

ಆ) ಹೌದು.

ಇ) ಸರ್ಕಾರದ ಆದೇಶ ಸಂಖ್ಯೆ: ಸಿಒ/67/ಸಿಎಲ್‌ಎಸ್/2008, ದಿನಾಂಕ: 27–08–2009ರನ್ವಯ 2008–09ನೇ ಸಾಲಿನಲ್ಲಿ ಶೇಕಡ 3ರಲ್ಲಿ ಬಡ್ಡಿ ದರದಲ್ಲಿ ಸಾಲ ಮಂಜೂರು ಮಾಡಲು ಆದೇಶಿಸಲಾಗಿದೆ ಮತ್ತು ಸರ್ಕಾರದ ಆದೇಶ ಸಂಖ್ಯೆ: ಸಿಒ/56/ಸಿಎಲ್‌ಎಸ್/2009,